ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ-300

29 ಏಪ್ರಿಲ್ 2023 * ಶನಿವಾರ * ಸಂಜೆ 6.00

ಸ್ಥಳ : ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಮೈಸೂರು

ದಿವ್ಯ ಸಾನ್ನಿಧ್ಯ
ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

ಅಧ್ಯಕ್ಷತೆ
ಶ್ರೀ ವಿಶ್ವನಾಥ್ ಪಿ. ಹಿರೇಮಠ
ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಉಪನ್ಯಾಸ
ಪ್ರೊ. ಹೆಚ್.ಎಸ್. ಶಿವಪ್ರಕಾಶ್
ಪ್ರಸಿದ್ಧ ಕವಿಗಳು ಮತ್ತು ನಾಟಕಕಾರರು

ವಿಷಯ : ಸಾಧನೆಯ ದೃಷ್ಟಿಯಿಂದ ವಚನಾನುಸಂಧಾನ

ಪ್ರಾಯೋಜಕರು
ಶ್ರೀಮತಿ ಡಿ.ಸಿ. ರಾಧಾ ಮತ್ತು ಶ್ರೀ ಪಿ. ಶಿವರಾಜು
ಹೆಚ್ಚುವರಿ ಆಯುಕ್ತರು, ಪ್ರಾದೇಶಿಕ ಆಯುಕ್ತರ ಕಛೇರಿ, ಮೈಸೂರು

ತಮಗೆಲ್ಲ ಆತ್ಮೀಯ ಸ್ವಾಗತ

ಪ್ರಸಾದ : ರಾತ್ರಿ 7.30

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದ್ದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ವಿಶ್ವನಾಥ್ ಪಿ. ಹಿರೇಮಠರವರು** ಕರ್ನಾಟಕ ವಿಶ್ವವಿದ್ಯಾಲಯದ ಎಂಬಿಎ ಪದವೀಧರರು. ಬೆಂಗಳೂರಿನ ಜಸ್ಟೀಸ್ ಸಂಸ್ಥೆಯಲ್ಲಿ ತರಬೇತಿ ಪಡೆದು 2005ರಲ್ಲಿ ಕೆಎಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದರು. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸಿದ್ದು ಪ್ರಸ್ತುತ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

**ಪ್ರೊ. ಹೆಚ್.ಎಸ್. ಶಿವಪ್ರಕಾಶ್‌ರವರು** ಕನ್ನಡದ ಪ್ರಮುಖ ಕವಿಗಳು ಮತ್ತು ನಾಟಕಕಾರರು. ಸುಮಾರು ಎರಡು ದಶಕಗಳ ಕಾಲ ಇಂಗ್ಲಿಷ್ ಅಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ. ನವದೆಹಲಿಯ ಜವಾಹರಲಾಲ್ ನೆಹರೂ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಆರ್ಟ್ಸ್ ಅಂಡ್ ಈಸ್ತೆಟಿಕ್ಸ್‌ನಲ್ಲಿ ಪ್ರಾಧ್ಯಾಪಕರಾಗಿದ್ದರು. ಏಳು ಕವನಸಂಕಲನಗಳು, ಹನ್ನೆರಡು ನಾಟಕಗಳು ಮತ್ತು ಇತರ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಇವರ ಅನೇಕ ಕೃತಿಗಳು ಇಂಗ್ಲಿಷ್, ಫ್ರೆಂಚ್, ಇಟ್ಯಾಲಿಯನ್, ಸ್ಪ್ಯಾನಿಷ್, ಜರ್ಮನ್, ಪೋಲಿಷ್, ಹಿಂದಿ, ಮಲಯಾಳಂ, ಮರಾಠಿ, ತಮಿಳು, ತೆಲುಗು ಮುಂತಾದ ಭಾಷೆಗಳಿಗೆ ಅನುವಾದಗೊಂಡಿವೆ. ಇವರ ನಾಟಕಗಳು ಕನ್ನಡ, ಹಿಂದಿ, ಅಸ್ಸಾಮಿ, ಬೋಡೋ, ತಮಿಳು ಮತ್ತು ಮಲಯಾಳಂ ಭಾಷೆಗಳಲ್ಲಿ ಪ್ರದರ್ಶಿತವಾಗಿವೆ.

**ಶ್ರೀ ಪಿ. ಶಿವರಾಜುರವರು** ಮಳವಳ್ಳಿ ತಾಲ್ಲೂಕು ಪೂರಿಗಾಲಿ ಗ್ರಾಮದವರು. 2010ರಲ್ಲಿ ಕೆಎಎಸ್ ಪರೀಕ್ಷೆಯಲ್ಲಿ ತೇರ್ಗಡೆ. ಹಾವೇರಿ, ಸಕಲೇಶಪುರ, ಕೊಡಗು ಮತ್ತು ಬೆಂಗಳೂರಿನಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸಿದ್ದಾರೆ. ಪ್ರಸ್ತುತ ಮೈಸೂರು ಪ್ರಾದೇಶಿಕ ಆಯುಕ್ತರ ಕಛೇರಿಯಲ್ಲಿ ಹೆಚ್ಚುವರಿ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಧರ್ಮಪತ್ನಿ ಶ್ರೀಮತಿ ಡಿ.ಸಿ. ರಾಧಾ ಗೃಹಿಣಿ. ಮಕ್ಕಳಾದ ಕು. ಸಾತ್ವಿಕ್ ಮತ್ತು ಕು. ಸಾನ್ವಿ ಪ್ರಾಥಮಿಕ ಶಿಕ್ಷಣ ಪಡೆಯುತ್ತಿದ್ದಾರೆ.